3. ಶಾಸನ ರಚನೆ

ಅ) ವಿಧೇಯಕಗಳನ್ನು ಮಂಡಿಸುವುದು

1) ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ, 2012

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಡಿ.ವಿ. ಸದಾನಂದಗೌಡ ಮುಖ್ಯಮಂತ್ರಿಗಳು :– ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು : – ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ.

2012ನೇ ಸಾಲಿನ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಅಧ್ಯಕ್ಷರು : – ಮಾನ್ಯ ಮುಖ್ಯಮಂತ್ರಿಗಳು ಈಗ ದಯವಿಟ್ಟು ವಿಧೇಯಕವನವನ್ನು ಮಂಡಿಸಬೇಕು.

ಶ್ರೀ ಡಿ.ವಿ. ಸದಾನಂದಗೌಡ ಮುಖ್ಯಮಂತ್ರಿಗಳು : – ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು : – ವಿಧೇಯಕವನ್ನು ಮಂಡಿಸಲಾಗಿದೆ.

2) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2012